ವಾರ್ತಾ ಭಾರತಿ
Bengaluru

# 'ಆತ್ಮ' ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಕರೆ

ಬೆಂಗಳೂರು, ಫೆ.6: ರೈತ ಸ್ನೇಹಿ 'ಆತ್ಮ 'ಯೋಜನೆಯನ್ನು ಪರಿಣಾಮಕಾರಿಯಾಗಿ ಮತ್ತು ಸಮರ್ಪಕವಾಗಿ ರಾಜ್ಯಾದ್ಯಂತ ಜಾರಿಗೊಳಿಸಬೇಕು ಎಂದು ಕೃಷಿ ಆಯುಕ್ತ ಡಾ ಜಿ.ಸತೀಶ್ ಕರೆ ನೀಡಿದ್ದಾರೆ.

ಸೋಮವಾರ ನಗರದ ಪಶುವೈದ್ಯಕೀಯ ಕಾಲೇಜು ಆವರಣದಲ್ಲಿ ಕೃಷಿ ಇಲಾಖೆ ಆಯೋಜಿಸಿದ್ದ ಆತ್ಮ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಆತ್ಮ ಯೋಜನೆಯು ರೈತರ ಪ್ರಗತಿಗೆ ಪೂರಕವಾದ ಯೋಜನೆ. ಈ ಯೋಜನೆಯ ಲಾಭಗಳನ್ನು ರೈತರಿಗೆ ತಿಳಿಸಲು ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ರೈತ ಸ್ನೇಹಿ 'ಆತ್ಮ 'ಯೋಜನೆಯನ್ನು ರಾಜ್ಯಾದ್ಯಂತ ಪರಿಣಾಮಕಾರಿಯಾಗಿ ಮತ್ತು ಸಮರ್ಪಕವಾಗಿ ಜಾರಿಗೊಳಿಸಬೇಕು. ಈ ನಿಟ್ಟಿನಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು ನಿರಂತರವಾಗಿ ರೈತರ ಸಂಪರ್ಕದಲ್ಲಿರಬೇಕು ಎಂದು ಕರೆಕೊಟ್ಟರು.



ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಎಚ್.ಶಿವಣ್ಣ ಮಾತನಾಡಿ, ದೇಶದಲ್ಲಿ ಕೃಷಿಗೆ ಯೋಗ್ಯವಾದ ಜಮೀನಿನ ಪ್ರಮಾಣ ಕ್ಷೀಣಿಸುತ್ತಿದೆ. ಇದರಿಂದ ಬೆಳೆಯುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಆಹಾರ ಒದಗಿಸಲು ಕಗ್ಗಂಟಾಗಿದೆ. ಆಹಾರ ಉತ್ಪಾದಕತೆ ಹೆಚ್ಚಿಸಲು ಕೃಷಿ ಪರ ಇಲಾಖೆಗಳು ಮತ್ತು ವಿಶ್ವವಿದ್ಯಾನಿಲಯಗಳು ಒಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯವು ಸಮಗ್ರ ಕೃಷಿ ಪದ್ಧತಿಯಲ್ಲಿ ಕೈಗೊಂಡ ಸಂಶೋಧನೆಗಳಿಂದ ಫಲಾನುಭವಿಗಳ ಒಟ್ಟಾರೆ ಆದಾಯ ನಾಲ್ಕುಪಟ್ಟು ಹೆಚ್ಚಾಗಿದೆ. ಹೀಗಾಗಿ ಈ ಸಂಶೋಧನೆಗಳನ್ನು ಹೆಚ್ಚಿನ ರೈತರು ಅಳವಡಿಸಿಕೊಳ್ಳಲು ಕಾರ್ಯಾಗಾರವು ಯೋಜನೆ ರೂಪಿಸಬೇಕು ಎಂದರು.

ನಬಾರ್ಡ್ ಮುಖ್ಯ ವ್ಯವಸ್ಥಾಪಕ ಎಂ.ಐ.ಗಾಣಿಗಿ ಮಾತನಾಡಿ, ನಮ್ಮ ದೇಶದಲ್ಲಿ ವಿವಿಧ ಬೆಳೆಗಳ, ಹೈನುಗಾರಿಕೆ ಮತ್ತು ಮೀನಿನ ಉತ್ಪಾದನೆ ಹೆಚ್ಚಾಗಿದೆ. ಆದರೆ ಉತ್ಪಾದಕತೆಯ ಗುಣಮಟ್ಟ ಚೀನಾ ದೇಶದಲ್ಲಿನ ಉತ್ಪಾದಕತೆಯ ಗುಣಮಟ್ಟದಷ್ಟಿಲ್ಲ. ನಮ್ಮ ದೇಶದ ಕೃಷಿ ಉತ್ಪಾದನೆಗಳ ಗುಣಮಟ್ಟವನ್ನು ಹೆಚ್ಚಿಸುವ ಕುರಿತು ರೈತರಿಗೆ ಮಾರ್ಗದರ್ಶನ ನೀಡಲು ಈ ಕಾರ್ಯಾಗಾರವು ಸಹಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಆತ್ಮ ಯೋಜನೆಯ ಮಾರ್ಗಸೂಚಿಯನ್ನು ಬಿಡುಗಡೆಗೊಳಿಸಿದರು. ಈ ವೇಳೆ ಕೃಷಿ ಇಲಾಖೆಯ ನಿರ್ದೇಶಕ ಬಿ.ವೈ.ಶ್ರೀನಿವಾಸ್, ಅಟಾರಿ, ಐಸಿಎಆರ್‌ನ ವಿಜ್ಞಾನಿ ಡಾ.ಚಂದ್ರೇಗೌಡ, ವಿಸ್ತರಣಾ ಅಧಿಕಾರಿ ಡಾ.ಕೆ.ಜಗದೀಶ್ವರ್ ಸೇರಿದಂತೆ ಇತರರು ಇದ್ದರು.



ಬೆಂಗಳೂರು ಹಾಗೂ ಧಾರವಾಡದ ಕೃಷಿ ವಿಶ್ವವಿದ್ಯಾನಿಲಯ, ಕೃಷಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಹೆಬ್ಬಾಳದ ಕೆವಿಸಿ ಆವರಣದಲ್ಲಿ ಹಮ್ಮಿಕೊಂಡಿದ್ದ ಆತ್ಮ ಕಾರ್ಯಾಗಾರದಲ್ಲಿ ಕೃಷಿ ಇಲಾಖೆ ಆಯುಕ್ತ, ಡಾ.ಪಿ.ಸತೀಶ್, ನಬಾರ್ಡ್‌ನ ಮುಖ್ಯ ವ್ಯವಸ್ಥಾಪಕ ಎಂ.ಐ. ಗಾಣಗಿ, ಕೃಷಿ ವಿವಿ ಕುಲಪತಿ ಡಾ. ಎಚ್. ಶಿವಣ್ಣ, ಕೃಷಿ ನಿರ್ದೇಶಕ ಬಿ.ವೈ. ಶ್ರೀನಿವಾಸ್ ಮತ್ತಿತರರಿದ್ದರು.

ಈ ಸಂಜೆ

ಮಂಗಳವಾರ
07 ಫೆಬ್ರವರಿ 2017